ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

File No: DTE-ADMI0ACM2/12/2020

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:26-11-2020.

-:: ಜ್ಞಾಪನ ::-

**ವಿಷಯ:** 2020-21ನೇ ಸಾಲಿನಲ್ಲಿ ಪೋಸ್ಟ್ ಡಿಪ್ಲೋಮಾ ಇಂಡಸ್ಟ್ರಿಯಲ್ ಸೇಫ್ಟಿ ಕೋರ್ಸಿಗೆ ಪ್ರವೇಶಾರ್ಹತೆ ನಿಗಧಿಪಡಿಸುವಿಕೆ ಹಾಗೂ **ಪ್ರವೇಶ ಅವಧಿಯನ್ನು ವಿಸ್ತರಿಸುವ** ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಪತ್ರ ಸಂ. ಇಡಿ 126 ಟಿಪಿಇ 2020, ದಿ:25-11-2020.
2. ನಿರ್ದೇಶಕರು, ರಾಜೀವ್ ಗಾಂಧಿ ಇನ್ಸಟಿಟ್ಯೂಟ್ ಆಫ್ ಸ್ಟೀಲ್ ಟೆಕ್ನಾಲಜಿ, ತೋರಣಗಲ್ಲು, ಸಂಡೂರು ತಾ॥, ಬಳ್ಳಾರಿ ಜಿಲ್ಲೆ ಇವರ ಪತ್ರ 2020-21/13, ದಿ:11-09-2020
3. ಈ ಕಛೇರಿ ಪ್ರವೇಶಾಧಿಸೂಚನೆ ದಿನಾಂಕ:02-09-2020.
4. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ಪತ್ರ ದಿ:03-10-2020, 20-10-2020 & 06-11-2020.

-00000000-

2020-21ನೇ ಸಾಲಿಗೆ ಪೋಸ್ಟ್ ಡಿಪ್ಲೋಮಾ ಇಂಡಸ್ಟ್ರಿಯಲ್ ಸೇಫ್ಟಿ ಕೋರ್ಸಿಗೆ ಸಂಬಂಧಿಸಿದಂತೆ ಉಲ್ಲೇಖ(3)ರ ಈ ಕಛೇರಿ ಅಧಿಸೂಚನೆಯಲ್ಲಿ ಎ.ಐ.ಸಿ.ಟಿ.ಇ ಪ್ರವೇಶ ಮಾರ್ಗಸೂಚಿ ಅನ್ವಯ ಡಿಪ್ಲೋಮಾ ವಿದ್ಯಾರ್ಹತೆಯನ್ನು ನಿಗಧಿಪಡಿಸಲಾಗಿತ್ತು. ಸದರಿ ಕೋರ್ಸಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸಲು ಅಂತಿಮ ದಿ:14-11-2020 ಎಂದು ನಿಗಧಿಪಡಿಸಿ ಪ್ರವೇಶಾತಿಯನ್ನು ಪೂರ್ಣಗೊಳಿಸಲು ಉಲ್ಲೇಖ(4)ರ ಈ ಕಛೇರಿ ಸುತ್ತೋಲೆಯಲ್ಲಿ ಅನುಮತಿ ನೀಡಲಾಗಿತ್ತು.

2020-21ನೇ ಶೈಕ್ಷಣಿಕ ಸಾಲಿನಲ್ಲಿ ಪೋಸ್ಟ್ ಡಿಪ್ಲೋಮಾ ಇನ್ ಇಂಡಸ್ಟ್ರಿಯಲ್ ಸೇಫ್ಟಿ ಕೋರ್ಸಿಗೆ ಪ್ರವೇಶ ಬಯಸುವ ಪ್ರಾಯೋಜಿತ ಅಭ್ಯರ್ಥಿಗಳ ಅರ್ಹತೆಯನ್ನು ಪರಿಗಣಿಸಿ ಪ್ರವೇಶಾತಿ ಮಾಡಿಕೊಳ್ಳಲು ಅಧಿಸೂಚನೆ ಹೊರಡಿಸಿ ಅವಧಿಯನ್ನು ವಿಸ್ತರಿಸಲು ಪ್ರಾಂಶುಪಾಲರು ಉಲ್ಲೇಖ(2)ರಲ್ಲಿ ಕೋರಿರುವ ಮನವಿಯನ್ನು ಪರಿಶೀಲಿಸಲಾಗಿ, ಸದರಿ ಕೋರ್ಸಿಗೆ ಪ್ರವೇಶ ಬಯಸುವ ಅಭ್ಯರ್ಥಿಗಳಿಗೆ ಎ.ಐ.ಸಿ.ಟಿ.ಇ ನವದೆಹಲಿ ಇವರು ನಿಗದಿಪಡಿಸಿರುವ ಅರ್ಹತೆಯನ್ನು ಒಳಗೊಂಡಂತೆ ಈ ಕೆಳಕಂಡಂತೆ ಪ್ರವೇಶ ಅರ್ಹತೆಯನ್ನು ನಿಗಧಿಪಡಿಸಿ ಉಲ್ಲೇಖ(1)ರ ಸರ್ಕಾರದ ಪತ್ರದಲ್ಲಿ ಅನುಮತಿ ನೀಡಲಾಗಿರುತ್ತದೆ.

| Course Name | Eligibility for Admission: |
|---|---|
| Post Diploma in Industrial Safety | 1. Diploma in any Engineering Branch<br>2. For Sponsored Candidates<br>a) Diploma/Graduate Engineering<br>b) B.Sc in Physics and Chemistry and 2 Years of Experience in industry. |

ಸರ್ಕಾರಿ ಪಾಲಿಟೆಕ್ನಿಕ್, ಬಳ್ಳಾರಿ ಹಾಗೂ ರಾಜೀವ್ ಗಾಂಧಿ ಇನ್ಸಟಿಟ್ಯೂಟ್ ಆಫ್ ಸ್ಟೀಲ್ ಟೆಕ್ನಾಲಜಿ, ತೋರಣಗಲ್ಲು, ಸಂಡೂರು ತಾ॥, ಬಳ್ಳಾರಿ ಜಿಲ್ಲೆ ಈ ಸಂಸ್ಥೆಗಳಲ್ಲಿ ಬೋಧಿಸಲಾಗುತ್ತಿರುವ ಪೋಸ್ಟ್ ಡಿಪ್ಲೋಮಾ ಇನ್ ಇಂಡಸ್ಟ್ರಿಯಲ್ ಸೇಫ್ಟಿ ಕೋರ್ಸಿಗೆ ಎ.ಐ.ಸಿ.ಟಿ.ಇ ನವದೆಹಲಿ ಇವರು ನಿಗದಿಪಡಿಸಿರುವ ಅರ್ಹತೆಯನ್ನು

ಒಳಗೊಂಡಂತೆ ಮೇಲ್ಕಂಡ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳಿಗೂ ಪ್ರವೇಶ ಪಡೆಯಲು ಅವಕಾಶ ಕಲ್ಪಿಸಿರುವುದರಿಂದ ಸದರಿ ಕೋರ್ಸಿಗೆ **ಅರ್ಜಿ ವಿತರಿಸಲು ಹಾಗೂ ಭರ್ತಿ ಮಾಡಿದ ಅರ್ಜಿಗಳನ್ನು ಸ್ವೀಕರಿಸಲು ಅಂತಿಮ ದಿನಾಂಕ: 05-12-2020 ರವರೆಗೆ ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.**

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ನಿಯಮಗಳ ಪ್ರಕಾರ **ದಿ:05-12-2020** ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರುಗಳು ತಮ್ಮ ಹಂತದಲ್ಲಿಯೇ ಅರ್ಹ ಅಭ್ಯರ್ಥಿಗಳ ಪ್ರವೇಶ ಪ್ರಕ್ರಿಯೆ ಪೂರ್ಣಗೊಳಿಸತಕ್ಕದ್ದು. ಪ್ರಯುಕ್ತ, ಇದನ್ನು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ. ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿಗಳನ್ನು ಹಾಗೂ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.

**ಆಯುಕ್ತರು**

**ಗೆ,**

1. ಪ್ರಿನ್ಸಿಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬಳ್ಳಾರಿ
2. ಪ್ರಿನ್ಸಿಪಾಲರು, ರಾಜೀವ್‌ಗಾಂಧಿ ಇನ್‌ಸ್ಟಿಟ್ಯೂಟ್ ಆಫ್ ಸ್ಟೀಲ್ ಟೆಕ್ನಾಲಜಿ, ತೋರಣಗಲ್, ಬಳ್ಳಾರಿ ಜಿಲ್ಲೆ.

} **ಸದರಿ ಜ್ಞಾಪನವನ್ನು ಸಂಸ್ಥೆಯ ಸೂಚನಾ ಫಲಕದಲ್ಲಿ ಅಭ್ಯರ್ಥಿಗಳಿಗೆ ಹಾಗೂ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸುವುದು ಹಾಗೂ ಸ್ಥಳೀಯ ದಿನಪತ್ರಿಕೆಗಳಲ್ಲಿ ಪ್ರಕಟಣೆ ನಿಡುವುದು.**

**<u>ಪ್ರತಿ ಮಾಹಿತಿಗಾಗಿ:-</u>**

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರು(ಆಡಳಿತ), ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ
5. ಜಂಟಿ ನಿರ್ದೇಶಕರು(ಸಿಡಿಸಿ)

   } ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ

6. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
7. ಇ-ಆಡಳಿತ ವಿಭಾಗಕ್ಕೆ – ಸದರಿ ಜ್ಞಾಪನವನ್ನು ಅಂತರ್ಜಾಲದಲ್ಲಿ ಪ್ರಕಟಿಸುವುದು.
8. ಸಿಡಿಸಿ ವಿಭಾಗಕ್ಕೆ
9. ಡಿವಿಪಿ(2) ವಿಭಾಗಕ್ಕೆ
10. ಕಛೇರಿ ಪ್ರತಿ